# ಕರ್ನಾಟಕ ವಿಧಾನ ಪರಿಷತ್

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 994 |
| ವಿಧಾನ ಪರಿಷತ್ ಸದಸ್ಯರು | ಶ್ರೀಮತಿ ಬಲ್ಕೀಸ್ ಬಾನು (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 24-07-2024 |
| ಉತ್ತರಿಸುವ ಸಚಿವರು | ಕಂದಾಯ ಸಚಿವರು |

<table>
<tr><th>ಕ್ರ.ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ರಾಜ್ಯದಲ್ಲಿನ ಕಂದಾಯ ಇಲಾಖೆಯ ಭೂಮಾಪನ ಮತ್ತು ಭೂ ದಾಖಲೆಗಳ ಇಲಾಖೆಯಲ್ಲಿ ಭೂಮಾಪಕರ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;</td><td>ಬಂದಿದೆ.</td></tr>
<tr><td>ಆ)</td><td>ಬಂದಿದ್ದಲ್ಲಿ, ಇದರಿಂದಾಗಿ ಸಾರ್ವಜನಿಕರಿಗೆ ತೊಂದರೆಯಾಗುತ್ತಿದ್ದು, ಕೊರತೆಯಿರುವ ಭೂಮಾಪಕರ ನೇಮಕಾತಿಗಾಗಿ ಸರ್ಕಾರ ಈವರೆವಿಗೂ ಕೈಗೊಂಡಿರುವ ಕ್ರಮಗಳೇನು;</td><td rowspan="2">ಭೂಮಾಪಕರ ಹುದ್ದೆಗಳ ಮಂಜೂರಾದ, ಭರ್ತಿಯಾದ ಹಾಗೂ ಖಾಲಿ ಇರುವ ಹುದ್ದೆಗಳ ವಿವರ ಕೆಳಕಂಡಂತಿದೆ.<br><table><tr><th>ಹುದ್ದೆ</th><th>ಮಂಜೂರಿ</th><th>ಭರ್ತಿ</th><th>ಖಾಲಿ</th></tr><tr><td>ಭೂಮಾಪಕರು</td><td>4020</td><td>3266</td><td>754</td></tr></table><br>ಖಾಲಿ ಇರುವ ಭೂಮಾಪಕರ 754 ಹುದ್ದೆಗಳ ಪೈಕಿ 750 ಭೂಮಾಪಕ ಹುದ್ದೆಗಳನ್ನು ನೇಮಕಾತಿ ಪ್ರಕ್ರಿಯೆ ಕೈಗೊಂಡು ಆಯ್ಕೆಪಟ್ಟಿಯನ್ನು ನೀಡಬೇಕೆಂದು ಕರ್ನಾಟಕ ಲೋಕಸೇವಾ ಆಯೋಗಕ್ಕೆ ದಿನಾಂಕ: 06.07.2024ರಂದು ಪತ್ರ ಬರೆಯಲಾಗಿದೆ.</td></tr>
<tr><td>ಇ)</td><td>ಯಾವ ಕಾಲಮಿತಿಯಲ್ಲಿ ಕೊರತೆಯಿರುವ ಭೂಮಾಪಕರ ನೇಮಕಾತಿಯನ್ನು ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದು;</td></tr>
<tr><td>ಈ)</td><td>ಇಲ್ಲದಿದ್ದಲ್ಲಿ, ಭೂಮಾಪಕರ ಕೊರತೆಯಿಂದಾಗಿ ರೈತರು ಮತ್ತು ಸಾರ್ವಜನಿಕರು ತೊಂದರೆ ಅನುಭವಿಸುತ್ತಿರುವುದನ್ನು ತಪ್ಪಿಸಲು ಕೊರತೆಯಿರುವ ಭೂಮಾಪಕರ ನೇಮಕಾತಿ ಮಾಡಲು ಸರ್ಕಾರಕ್ಕಿರುವ ತೊಂದರೆಗಳೇನು? (ವಿವರ ನೀಡುವುದು)</td><td>ರಾಜ್ಯದಲ್ಲಿ 3272 ಸರ್ಕಾರಿ ಭೂಮಾಪಕರು ಹಾಗೂ 4132 ಪರವಾನಗಿ ಭೂಮಾಪಕರು ಸಕ್ರಿಯವಾಗಿ ವಿವಿಧ ತಾಲ್ಲೂಕುಗಳಲ್ಲಿ ಕಾರ್ಯ ನಿರ್ವಹಿಸುತ್ತಿರುತ್ತಾರೆ. ಭೂಮಾಪಕರ ಕೊರತೆ ಇರುವ ತಾಲ್ಲೂಕುಗಳಲ್ಲಿ ಪರವಾನಗಿ ಭೂಮಾಪಕರನ್ನು ಬಳಸಿಕೊಂಡು ರೈತರು ಮತ್ತು ಸಾರ್ವಜನಿಕರ ತೊಂದರೆ ನಿವಾರಿಸಲು ಕ್ರಮವಹಿಸಲಾಗಿದೆ.</td></tr>
</table>

ಸಂಖ್ಯೆ: ಕಂಇ 127 ಎಸ್ಎಸ್‌ಸಿ 2024

(ಕೃಷ್ಣ ಬೈರೇಗೌಡ)
ಕಂದಾಯ ಸಚಿವರು